371 ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ತಾಲ್ಲೂಕಿನ ಕಾತರಕಿ ಗುಡ್ಲಾನೂರು ಮತ್ತು ಹುಲಗಿ ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವ ಸಾಲಿನಿಂದ ಪ್ರಾರಂಭಿಸಲಾಗುವುದು;

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 2001ರ ಜನಗಣತಿ ಪ್ರಕಾರ ಕೊಪ್ಪಳ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆಯು 2,49.640 ಆಗಿದೆ. ಮಾರ್ಗಸೂಚಿಗಳ ಪ್ರಕಾರ ಈ ತಾಲ್ಲೂಕಿಗೆ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಅವಕಾಶವಿದೆ. ಆದಾಗ್ಯೂ, ಸದರಿ ತಾಲ್ಲೂಕಿನಲ್ಲಿ ಈಗಾಗಲೇ 13 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಆದುದರಿಂದ, ಇಲ್ಲಿಗೆ ಇನ್ನೂ ಹೆಚ್ಚಿನ ಸಂಖ್ಯೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

514 ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಹರಡಿ ಪ್ರಾಣಹಾನಿ ಮತ್ತಿತರ ಆರೋಗ್ಯಕ್ಕೆ ಹಾನಿಕರವಾದ ಹೆಚ್-1 ಎನ್-1, ಚಿಕೂನ್‌ಗುನ್ಯಾ ಮತ್ತಿತರ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; ಇಂಥ ಮಾರಕ ರೋಗಗಳಿಂದಾಗಿ ಪ್ರಾಣಹಾನಿಗೊಳಗಾದವರ ಸಂಖ್ಯೆ ಎಷ್ಟು;

ಆ) ರೋಗ ನಿಯಂತ್ರಣ ಮತ್ತು ಪ್ರತಿಬಂಧಕ ಕಾರ್ಯಕ್ರಮಗಳ ಕುರಿತಾದ ವಿವರಗಳೇನು?